# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ - 125
ಉತ್ತರಿಸಬೇಕಾದ ದಿನಾಂಕ - 10.07.2018
ಸದಸ್ಯರ ಹೆಸರು - ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಅಕ್ಕಪಕ್ಕದ ಹಾಗೂ ಅಲೆಮಾರಿ ಜನಾಂಗದ ನಿವಾಸಿಗಳಿಗೆ ಮನೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; | ಹೌದು.<br><br>ರಾಜ್ಯ ಸರ್ಕಾರವು ಅಲೆಮಾರಿ ಜನಾಂಗದವರನ್ನು ಒಳಗೊಂಡಂತೆ ದೇವರಾಜ್ ಅರಸು ವಸತಿ ಯೋಜನೆಯಡಿ 14 ವಿಶೇಷ ವರ್ಗಗಳಿಗೆ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ. ಈ ಯೋಜನೆಯಡಿ ಸರ್ಕಾರವು ಪ್ರತಿ ವರ್ಷ ಆಯವ್ಯಯದಲ್ಲಿ ಒದಗಿಸಲಾಗುವ ಅನುದಾನಕ್ಕೆ ಅನುಗುಣವಾಗಿ ಮನೆಗಳನ್ನು ಮಂಜೂರು ಮಾಡಲಾಗುತ್ತಿದೆ.<br><br>ಅದರಂತೆ, ಬೀದರ್ ಜಿಲ್ಲೆಗೆ ಸಂಬಂಧಿಸಿದಂತೆ ಅಲೆಮಾರಿ ಜನಾಂಗದವರಿಗೆ 2014-15ನೇ ಸಾಲಿನಿಂದ 2017-18ನೇ ಸಾಲಿನವರೆಗೆ ಒಟ್ಟು 425 ಮನೆಗಳನ್ನು ಮಂಜೂರು ಮಾಡಲಾಗಿದೆ. |
| ಆ) | ಎಷ್ಟು ಅಕ್ಕಪಕ್ಕದ ಹಾಗೂ ಅಲೆಮಾರಿ ಜನಾಂಗದ ನಿವಾಸಿಗಳಿಗೆ ಮನೆ ಇಲ್ಲದಿರುವ ಬಗ್ಗೆ ಸರ್ವೆ ನಡೆಸಲಾಗಿದೆಯೇ; ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? | ಸಾಮಾಜಿಕ ಆರ್ಥಿಕ ಜಾತಿ ಜನಗಣತಿ 2011ರ ಸಮೀಕ್ಷೆಯಂತೆ ಬೀದರ್ ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಒಟ್ಟಾರೆಯಾಗಿ 160852 ವಸತಿರಹಿತ ಫಲಾನುಭವಿಗಳಿರುವುದು ಕಂಡು ಬಂದಿರುತ್ತದೆ.<br><br>ಸಮೀಕ್ಷೆಯಲ್ಲಿ ಕಂಡು ಬಂದ ವಸತಿರಹಿತರಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ನೀಡಲಾಗುವ ಅನುದಾನಕ್ಕೆ ಅನುಗುಣವಾಗಿ ಆದ್ಯತೆಯ ಮೇರೆಗೆ ಹಂತ ಹಂತವಾಗಿ ವಸತಿ ಸೌಕರ್ಯವನ್ನು ಕಲ್ಪಿಸಲು ಕ್ರಮ ವಹಿಸಲಾಗುತ್ತಿದೆ. |

ಸಂಖ್ಯೆ: ವಇ 136 ಹೆಚ್‌ಎಎಂ 2018

(ಯು.ಟಿ. ಅಬ್ದುಲ್ ಖಾದರ್)
ವಸತಿ ಸಚಿವರು.